ದೂರವಾಣಿ: 08282 256166 / 257396
ಫ್ಯಾಕ್ಸ್: 08282 257516

# ಕುವೆಂಪು ವಿಶ್ವವಿದ್ಯಾಲಯ

ರಿಜಿಸ್ಟ್ರಾರ್ ಮೌಲ್ಯಮಾಪನವರ ಕಛೇರಿ
ಜ್ಞಾನಸಹ್ಯಾದ್ರಿ, ಶಂಕರಘಟ್ಟ–577 451

ಸಂಖ್ಯೆ/ಕುವಿ/ಪವಿ/ 897 2015–16

ದಿನಾಂಕ: 05–05–2015

## ಪ್ರಕಟಣೆ

ವಿಷಯ: ಜೂನ್–2015ರಲ್ಲಿ ನಡೆಯುವ ಬಿ.ಇಡಿ ಪದವಿ ಪರೀಕ್ಷೆಗಳ ಅರ್ಜಿ ಸಲ್ಲಿಸುವ ಕುರಿತು.

*****

2014–15ನೇ ಸಾಲಿನ ಬಿ.ಇಡಿ ಪದವಿಯ ಪ್ರಥಮ ಮತ್ತು ರೀಪಿಟರ್ಸ್ ಪ್ರಥಮ ಮತ್ತು ದ್ವಿತೀಯ ಸೆಮಿಸ್ಟರ್‌ನ ಲಿಖಿತ ಪರೀಕ್ಷೆಗಳು ಜೂನ್ 2015ರ ಮಾಹೆಯಲ್ಲಿ ನಡೆಯಲಿವೆ. ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಜಿಯನ್ನು ಮತ್ತು ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರ ಮೂಲಕ Onlineನಲ್ಲಿ ರಿಜಿಸ್ಟ್ರಾರ್(ಮೌಲ್ಯಮಾಪನ) ಇವರಿಗೆ ಸಲ್ಲಿಸಲು ತಿಳಿಸಲಾಗಿದೆ.

| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು: | | |
|---|---|---|
| 1. | ದಂಡ ಶುಲ್ಕವಿಲ್ಲದೆ | ದಿನಾಂಕ: 10–05–2015 ರಿಂದ 20–05–2015 |
| 2. | ರೂ. 100/– ದಂಡ ಶುಲ್ಕಸಹಿತ | ದಿನಾಂಕ: 21–05–2015 ರಿಂದ 25–05–2015 |
| 3. | ರೂ. 500/– ದಂಡ ಶುಲ್ಕಸಹಿತ | ದಿನಾಂಕ: 26–05–2015 ರಿಂದ 30–05–2015 |

| ಶುಲ್ಕದ ವಿವರಗಳು | | |
|---|---|---|
| 1. | ಪೂರ್ಣ ಪರೀಕ್ಷೆಗೆ | ರೂ. 575/– |
| 2. | ಪ್ರತಿ ಪತ್ರಿಕೆಗೆ<br>(ಆ ಸೆಮಿಸ್ಟರ್‌ನ ಎಲ್ಲಾ ಪತ್ರಿಕೆಗಳಿಗೆ ರೂ. 575/–ಒಳಪಟ್ಟು) | ರೂ. 125/– |
| 3. | ಪ್ರಾಯೋಗಿಕ ಪರೀಕ್ಷೆಗೆ | ರೂ. 70/– |
| 4. | ಅಂಕಪಟ್ಟಿ ಶುಲ್ಕ | ರೂ. 125/– |

## ವಿದ್ಯಾರ್ಥಿಗಳಿಗೆ ಸೂಚನೆ:

1. ವಿದ್ಯಾರ್ಥಿಗಳು online ಮುಖಾಂತರ ಅರ್ಜಿ ಸಲ್ಲಿಸಲು student.logisys.net.in/kus ನಲ್ಲಿ login ಆಗಿ ನೊಂದಣಿ ಸಂಖ್ಯೆ, ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿದ ನಂತರ ಶುಲ್ಕದ ವಿವರಗಳುಳ್ಳ ಅರ್ಜಿ ಮುದ್ರಿಸಿ ಇಂಟರ್‌ನೆಟ್ ಬ್ಯಾಂಕಿನಲ್ಲಿ ಅಥವಾ ಯಾವುದೇ ಅಂಚೆ ಕಛೇರಿಯಲ್ಲಿ ಶುಲ್ಕ ಭರಿಸಿದ ನಂತರ ಪ್ರತಿಯನ್ನು ಕಾಲೇಜುಗಳಲ್ಲಿ ಸಲ್ಲಿಸಬೇಕು.

2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಯಾವುದೇ ATM (Debit) Card/Credit Card/Online Banking ಮೂಲಕ SBMನ Pay U ಮೂಲಕ ನೇರವಾಗಿ ಹಣಪಾವತಿಸಬಹುದಾಗಿದೆ, ಅಥವಾ ಆನ್‌ಲೈನ್‌ನಲ್ಲಿ ಚಲನ್ ಮುದ್ರಿಸಿಕೊಂಡು ಅಂಚೆಕಛೇರಿ ಮುಖಾಂತರ ಪಾವತಿಸಿದ ನಂತರ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯಮಾಡಲಾಗುವುದಿಲ್ಲ.

3. ರೂ. 2 ಲಕ್ಷ ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ ಪರಿಶಿಷ್ಟ ಜಾತಿ:ಪರಿಶಿಷ್ಟ ಪಂಗಡದ Freshers ವಿದ್ಯಾರ್ಥಿಗಳಿಗೆ ಮಾತ್ರ ನಿಯಮಾನುಸಾರ ಶುಲ್ಕ ವಿನಾಯಿತಿ ಇರುತ್ತದೆ. ಆದರೆ ಅಂತಹ ಅಭ್ಯರ್ಥಿಗಳು ಅಂಕಪಟ್ಟಿ ಶುಲ್ಕ ರೂ. 125-00ನ್ನು ಪಾವತಿಸಬೇಕು.

ಅ. ರೂ. 2.00 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಆ. ವಿನಾಯಿತಿ ಹೊಂದಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಅವರುಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನದಿಂದ ಕಟಾಯಿಸಿ ಆಯಾ ವಿಭಾಗ / ಕಾಲೇಜುಗಳ ಪ್ರಾಂಶುಪಾಲರು ವಿಶ್ವವಿದ್ಯಾಲಯಕ್ಕೆ ಜಮಾ ಮಾಡಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳು / ವಿದ್ಯಾರ್ಥಿ ವೇತನ ಮಂಜೂರಾಗದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

ಪ್ರವರ್ಗ-1 ಹಾಗೂ ರೂ. 44,500=00 ಅಥವಾ ಇದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ ಹಾಗೂ ಇತರೆ Freshers ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಭರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ./201/ಬಿ.ಎಂ.ಎಸ್/2011 ಬೆಂಗಳೂರು ದಿನಾಂಕ: 23-06-2012ರಲ್ಲಿ ತಿಳಿಸಿರುತ್ತಾರೆ.

4. **ಪರಿಶಿಷ್ಟಜಾತಿ:ಪರಿಶಿಷ್ಟಪಂಗಡ ಹಾಗೂ ಮೇಲ್ಕಂಡ ವರ್ಗಗಳ ಮರುಯತ್ನದ (Repeaters) ವಿದ್ಯಾರ್ಥಿಗಳು ಹಾಗೂ ದಂಡ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿನಾಯಿತಿ ಇರುವುದಿಲ್ಲ.**

5. ಶುಲ್ಕ ವಿನಾಯಿತಿ ಬಯಸುವ ಎಲ್ಲಾ ವಿದ್ಯಾರ್ಥಿಗಳು ಸಕ್ಷಮ ಅಧಿಕಾರಿಗಳಿಂದ ಪಡೆದ ಆದಾಯ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಕಾಲೇಜಿಗೆ ಒಪ್ಪಿಸಬೇಕು.

6. **ಶೇಕಡಾ 75 ಹಾಜರಾತಿ ಕಡ್ಡಾಯ. ಯಾವ ಅಭ್ಯರ್ಥಿ ಶೇಕಡ 75 ಹಾಜರಾತಿ ಗಳಿಸಿರುವುದಿಲ್ಲವೋ ಅಂತಹ ವಿದ್ಯಾರ್ಥಿಗೆ ಪರೀಕ್ಷಾ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.**

7. ಪ್ರವೇಶ ಅನುಮೋದನೆಯಾಗದಿರುವುದು, ಸರಿಯಾದ ಪರೀಕ್ಷಾ ಶುಲ್ಕ ಇತ್ಯಾದಿ ಪಾವತಿಸದಿರುವುದು, ಹಾಜರಾತಿ ಕೊರತೆ, ಪರೀಕ್ಷಾ ಅಕ್ರಮವಾಗಿರುವುದು ಇತ್ಯಾದಿ ನ್ಯೂನತೆ ಇರುವುದು ಕಂಡುಬಂದಲ್ಲಿ ಅಂತಹವರ ಫಲಿತಾಂಶ ತಡೆಹಿಡಿಯಲಾಗುವುದು.

8. ಶುಲ್ಕ ಪಾವತಿಸಲು, ಅರ್ಜಿ ಸಲ್ಲಿಸಲು, ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣದಿಂದಲೂ ವಿಸ್ತರಿಸಲಾಗುವುದಿಲ್ಲ.

9. ಯಾವ ಅಭ್ಯರ್ಥಿ ಯಾವ ಕೇಂದ್ರದಲ್ಲಿ ಥಿಯರಿ ಪರೀಕ್ಷೆ ಬರೆಯಬೇಕು ಎಂಬುದನ್ನು ಪ್ರವೇಶ ಪತ್ರದಲ್ಲಿ ಮುದ್ರಿಸಲಾಗಿದೆ. ಪರೀಕ್ಷಾ ಕೇಂದ್ರ ಬದಲಿಸಲು ಅವಕಾಶವಿಲ್ಲ.

10. ಒಂದು ವೇಳೆ ಅರ್ಹ ಅಭ್ಯರ್ಥಿಗೆ ಸಂಬಂಧಿಸಿದಂತೆ ಕಂಪ್ಯೂಟರಿನಿಂದ ಪರೀಕ್ಷಾ ಅರ್ಜಿ ಮುದ್ರಿಸಿ ಕಳುಹಿಸಲಾಗದಿದ್ದಲ್ಲಿ ಆ ಅಭ್ಯರ್ಥಿ ಕಾಲೇಜಿನಿಂದ ನಿಗದಿತ ಅರ್ಜಿ ನಮೂನೆಯನ್ನು ಪಡೆದು ಅದರಲ್ಲಿ ಅಗತ್ಯವಾದ ಎಲ್ಲ ಮಾಹಿತಿಯನ್ನು ಭರ್ತಿ ಮಾಡಿ ಕಾಲೇಜಿನ ಪ್ರಾಂಶುಪಾಲರಿಗೆ ಸಲ್ಲಿಸಬೇಕು.

11. **ವಿದ್ಯಾರ್ಥಿಗಳು ಪರೀಕ್ಷೆಗೆ ಕಟ್ಟುವ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿ ಮಾಡುವುದಿಲ್ಲ.**

12. ಈಗಾಗಲೇ ಮರು ಮೌಲ್ಯಮಾಪನ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳೂ ಕೂಡಾ ನಿಗದಿತ ಸಮಯದಲ್ಲಿ ಪರೀಕ್ಷಾ **ಶುಲ್ಕ ಪಾವತಿಸಬೇಕು.**